ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ರವರ ನ್ಯಾಯಾಲಯ, ಮಳವಳ್ಳಿ.

ಸಿಸಿ ನಂ: **18/2016**

| | | |
|---|---|---|
| ಹೆಸರು | ಚಿಕ್ಕಸ್ವಾಮಿ | ಸಿ.ಡಬ್ಲ್ಯೂ **- 4** |
| ತಂದೆಯ ಹೆಸರು | ಲೇಟ್ ಚಿಕ್ಕೇಗೌಡ | ಪಿ.ಡಬ್ಲ್ಯೂ **- 5** |
| ವಯಸ್ಸು | 45 ವರ್ಷ | |
| ಉದ್ಯೋಗ | ವ್ಯವಸಾಯ | |
| ವಾಸ ಸ್ಥಳ | ವಾಸುವಳ್ಳಿ | |

ಸಾಕ್ಷಿಗೆ ದಿನಾಂಕ: 09.06.2026 ರಂದು ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ: ಎ ಪಿ ಪಿ ರರಿಂದ ::

ಈಗ ನೋಡುತ್ತಿರುವ ನಿಪಿ 4 ರಿಂದ 7 ಕ್ಕೆ ಸುಮಾರು 10 ವರ್ಷಗಳ ಹಿಂದೆ ಸಹಿ ಮಾಡಿದ್ದು ಯಾವ ಸ್ಥಳದಲ್ಲಿ, ಯಾವ ಉದ್ದೇಶಕ್ಕಾಗಿ ಸಹಿ ಮಾಡಿರುತ್ತೇನೆ ಎಂದು ನನಗೆ ಗೊತ್ತಿರುವುದಿಲ್ಲ. ಸಾಕ್ಷಿಯ ಸಹಿಗಳನ್ನು ನಿಪಿ 4 ಬಿ ಯಿಂದ 7 ಬಿ ಎಂದು ಗುರುತಿಸಲಾಯಿತು. ನಿಪಿ 4 ರಿಂದ 7 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿರುವುದಿಲ್ಲ. ಈಗ ನೋಡುತ್ತಿರುವ ಮೊತ್ತೊಂದು ದಾಖಲೆಗೆ ಎಲ್ಲಿ ಸಹಿ ಮಾಡಿರುತ್ತೇನೆ ಎಂದು ನನಗೆ ಗೊತ್ತಿರುವುದಿಲ್ಲ. ಸದರಿ ದಾಖಲೆಯು ಅಮಾನತ್ತು ಮಹಜರ್ ಆಗಿದ್ದು, ಅದನ್ನು ನಿಪಿ 9 ಎಂದು, ಸಾಕ್ಷಿಯ ಸಹಿಯನ್ನು ನಿಪಿ 9 ಎ ಎಂದು ಗುರುತಿಸಲಾಯಿತು. ನಿಪಿ 9 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿರುವುದಿಲ್ಲ. ನಾನು ಪೊಲೀಸರ ಮುಂದೆ ಹೇಳಿಕೆಯನ್ನು ನೀಡಿರುವುದಿಲ್ಲ.

ಎಪಿಪಿ ಯವರ ವಿನಂತಿ ಮೇರೆಗೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿಸಲಾಯಿತು.

ಪಾಟೀ ಸವಾಲು: ಎ ಪಿ ಪಿ ರವರಿಂದ ::

ದಿ: 15.04.2013 ರಂದು ಮಳವಳ್ಳಿ ಪುರ ಪೊಲೀಸ್ ಠಾಣೆಯ ಆವರಣದಲ್ಲಿ ನನ್ನ ಮತ್ತು ಚಾಸಾ 3 ರವರ ಸಮಕ್ಷಮ ಬೆಳಿಗ್ಗೆ 11 ರಿಂದ 11-30 ರ ಅವಧಿಯಲ್ಲಿ ಮಹಜರ್ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಅದೇ ದಿನ ಪೊಲೀಸರು ನನ್ನ ಮತ್ತು ಚಾಸಾ 3 ರವರ ಸಮಕ್ಷಮ ನಿಪಿ 5 ರಿಂದ 7 ಕ್ಕೆ ಮೃತ ಬಸವಯ್ಯರವರ ಹೆಬ್ಬೆಟ್ಟಿನ ಗುರುತುಗಳನ್ನು ಪಡೆದಿರುತ್ತಾರೆ ಎಂದರೆ ಸರಿಯಲ್ಲ. ದಿ: 28.08.2013 ರಂದು ಪೊಲೀಸ್ ಠಾಣಾ ಆವರಣದಲ್ಲಿ ನನ್ನ ಮತ್ತು ಚಾಸಾ 7 ರವರ ಸಮಕ್ಷಮ ಮದ್ಯಾಹ್ನ 12 ರಿಂದ 1-30 ರ ಅವಧಿಯಲ್ಲಿ ನಿಪಿ 9 ರಂತೆ ಮಹಜರ್ ಮಾಡಿ, ಒಂದು ಅಸಲು ಭೋಗ್ಯ ಪತ್ರ, ಅಸಲು ಕ್ರಯ ಪತ್ರ, ಭೋಗ್ಯ ತೀರುವಳಿ ಆಗಿರುವ ದೃಢೀಕೃತ ಪತ್ರಗಳು ಮತ್ತು ಅಸಲು ಕರಡು ಕ್ರಯ ಪತ್ರಗಳನ್ನು ಅಮಾನತ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಈಗ ಓದಿ ಹೇಳಲಾದಂತೆ

ನಾನು ಪೊಲೀಸರ ಮುಂದೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ಅಲ್ಲಗಳೆದ ಕಾರಣ ಅದನ್ನು ನಿಪಿ 10 ಎಂದು ಗುರುತಿಸಲಾಯಿತು. ಎಲ್ಲಾ ಗೊತ್ತಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲು ಃಆರೋಪಿ ಪರ: ವಕೀಲರಿಂದ</u>

ಪಾಟೀ ಸವಾಲು ಇರುವುದಿಲ್ಲ.

ಮರು ವಿಚಾರಣೆ ಇಲ್ಲ.

ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು.

ಓ ಹೇ ಕೇ ಸ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಮಳವಳ್ಳಿ.